Fax: 08282-256262
E-mail:kuvempuacademic@gmail.com

Phone No - 08282-256149
Website:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

**ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ, ಜ್ಞಾನಸಹ್ಯಾದ್ರಿ,**
ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

ಸಂಖ್ಯೆ:ಕುವಿ:ಶೈವಿ:ಎಸಿ–8: 3160 :2022–23

ದಿನಾಂಕ:08–11–2022

## ಸುತ್ತೋಲೆ

**ವಿಷಯ: 2022–23ನೇ ಶೈಕ್ಷಣಿಕ ಸಾಲಿಗೆ ಸ್ನಾತಕೋತ್ತರ ಪದವಿಗಳ ಪ್ರವೇಶಾತಿ ಪರಿಷ್ಕೃತ ಶುಲ್ಕವನ್ನು ಪರಿಚಲಿಸುತ್ತಿರುವ ಕುರಿತು.**

ಉಲ್ಲೇಖ: 1. ದಿನಾಂಕ:25–05–2022ರಂದು ನಡೆದ ಶುಲ್ಕ ಪರಿಷ್ಕರಣೆ ಸಮಿತಿ ಸಭೆಯ ನಿರ್ಣಯ.
2. ದಿನಾಂಕ:21–06–2022ರಂದು ನಡೆದ ಶುಲ್ಕ ಪರಿಷ್ಕರಣೆ ಸಮಿತಿ ಸಭೆಯ ನಿರ್ಣಯ.
3. ಸಿಂಡಿಕೇಟ್ ಸಭೆಯ ನಿರ್ಣಯ ದಿನಾಂಕ:30–07–2022.
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:08–11–2022.

*****

ವಿಶ್ವವಿದ್ಯಾಲಯದ ಎಲ್ಲಾ ಸ್ನಾತಕೋತ್ತರ ಪದವಿಗಳ ಶುಲ್ಕಗಳನ್ನು 2017–18ನೇ ಶೈಕ್ಷಣಿಕ ಸಾಲಿನಿಂದ ಅಂದರೆ ಕಳೆದ ಐದು ವರ್ಷಗಳಿಂದ ಯಾವುದೇ ಹೆಚ್ಚಳ ಮಾಡಿರುವುದಿಲ್ಲ. ಹಾಗೂ 2020–21ನೇ ಮತ್ತು 2021–22ನೇ ಶೈಕ್ಷಣಿಕ ಸಾಲಿನಲ್ಲಿ ಕೋವಿಡ್–19ರ ಹಿನ್ನೆಲೆಯಲ್ಲಿ ಯಾವುದೇ ಶುಲ್ಕಗಳನ್ನು ಪರಿಷ್ಕರಿಸಿರುವುದಿಲ್ಲ.

ಇತ್ತೀಚಿನ ದಿವಸಗಳಲ್ಲಿ ವಿಶ್ವವಿದ್ಯಾಲಯದ ಶೈಕ್ಷಣಿಕ ಹಾಗೂ ಆಡಳಿತ ವೆಚ್ಚಗಳಲ್ಲಿ ಗಣನೀಯ ಏರಿಕೆಯಾಗಿದ್ದು, ವೆಚ್ಚಗಳನ್ನು ಸರಿದೂಗಿಸುವುದು ಅನಿವಾರ್ಯವಾಗಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಶುಲ್ಕಗಳನ್ನು ಹೆಚ್ಚಿಸುವ ಸಂಬಂಧ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಶುಲ್ಕ ಪರಿಷ್ಕರಣ ತಜ್ಞರ ಪಟ್ಟಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಉಲ್ಲೇಖಿತ (1) ಮತ್ತು (2)ರಲ್ಲಿ 2022–23ನೇ ಶೈಕ್ಷಣಿಕ ಸಾಲಿನಿಂದ ಎಲ್ಲಾ ಸ್ನಾತಕೋತ್ತರ ಪದವಿಗಳಿಗೆ ಶೇ.10ರಷ್ಟು ಶುಲ್ಕಗಳನ್ನು ಹೆಚ್ಚಿಸಿ ಪರಿಷ್ಕರಿಸಲಾಗಿದ್ದು, ಉಲ್ಲೇಖಿತ (3)ರ ಸಿಂಡಿಕೇಟ್ ಸಭೆಯ ನಿರ್ಣಯದನುಸಾರ ಎಲ್ಲಾ ಸ್ನಾತಕೋತ್ತರ ಪದವಿಗಳ ಪ್ರವೇಶಾತಿ ಶುಲ್ಕದಲ್ಲಿ ಶೇ. 10ರಷ್ಟು ಶುಲ್ಕಗಳನ್ನು ಹೆಚ್ಚಳ ಮಾಡಲು ಉಲ್ಲೇಖಿತ (4)ರ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ 2022–23ನೇ ಶೈಕ್ಷಣಿಕ ಸಾಲಿನಿಂದ ಮುಂದಿನ ಆದೇಶದವರೆವಿಗೂ ಪರಿಷ್ಕೃತ ಶುಲ್ಕವು ಜಾರಿಯಲ್ಲಿರುತ್ತದೆ.

ಎಲ್ಲಾ ವಿಭಾಗದ ಅಧ್ಯಕ್ಷರು/ ಸಂಯೋಜನಾಧಿಕಾರಿಗಳು ತಮ್ಮ ವಿಭಾಗದ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಈ ಹಿಂದಿನ ಐದು ವರ್ಷಗಳಿಂದ ಯಾವುದೇ ಶುಲ್ಕ ಹೆಚ್ಚಳ ಮಾಡದೆ ಇದ್ದು, ಕೆಲ ಆಡಳಿತಾತ್ಮಕ ವೆಚ್ಚಗಳನ್ನು ಕನಿಷ್ಠ ಮಟ್ಟದಲ್ಲಿ ಸರಿದೂಗಿಸಲು ಶುಲ್ಕ ಹೆಚ್ಚಳ ಮಾಡುವುದು ಅನಿವಾರ್ಯವಾಗಿರುವ ಅಂಶಗಳನ್ನು ಮನವರಿಕೆ ಮಾಡಿಕೊಡಲು ತಿಳಿಸಲಾಗಿದೆ. ಶುಲ್ಕಕ್ಕೆ ಸಂಬಂಧಿಸಿದ ಅನುಬಂಧಗಳನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್ www.kuvempu.ac.in ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಸೂಚಿಸಲಾಗಿದೆ.

ಕುಲಪತಿಯವರಿಂದ ಅನುಮೋದಿಸಲ್ಪಟ್ಟಿದೆ

ಉಪಕುಲಸಚಿವರು
**ಉಪ ಕುಲಸಚಿವ**
**ಶೈಕ್ಷಣಿಕ ವಿಭಾಗ,**
**ಕುವೆಂಪು ವಿಶ್ವವಿದ್ಯಾನಿಲಯ**
**ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577 451**
**ಶಿವಮೊಗ್ಗ ಜಿಲ್ಲೆ.**

ಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗದ ಅಧ್ಯಕ್ಷರು / ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ. – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕಡೂರು.
3. ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ/ಚಿಕ್ಕಮಗಳೂರು ಜಿಲ್ಲೆಯ ಸ್ನಾತಕೋತ್ತರ ಪದವಿಗಳ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.

ಪ್ರತಿಗಳು:

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ರಕ್ಷಣಾ ಕಡತ.
3. ಕಛೇರಿ ಪ್ರತಿ.